# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.23 ರ ನಾಗವಾರಕ್ಕೆ ಸಂಬಂಧಿಸಿದಂತೆ ದಿನಾಂಕ: 02.07.2022 ರಂದು ಶ್ರೀ.ಇಮ್ರಾನ್.ಪಿ.ಎ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಸಭೆಯಲ್ಲಿ ಹಾಜರಿದ್ದವರ ವಿವರ:-**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ಇಮ್ರಾನ್.ಪಿ.ಎ | ನೋಡಲ್ ಅಧಿಕಾರಿಗಳು ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ.23 ನಾಗವಾರ |
| 2 | ಶ್ರೀ.ನಾಗರಾಜು | ಸಹಾಯಕ ಅಭಿಯಂತರರು & ಕಾರ್ಯದರ್ಶಿಗಳು ವಾರ್ಡ್ ಸಂಖ್ಯೆ.23 ನಾಗವಾರ |
| 3 | ಶ್ರೀ.ವಿಲಿಯಂ | ಮಾಜಿ ನಾಮಿನೇಟೆಡ್ ಕಾರ್ಪೋರೇಟರ್ |
| 4 | ಶ್ರೀ.ಸಂತೋಷ್ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ |
| 5 | ಶ್ರೀ.ಶ್ರೀರಾಮ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ.ಮೋಹನ್ | ಕಂದಾಯ ಪರಿವೀಕ್ಷಕರು |
| 7 | Beulah.P | ಶಿಕ್ಷಕರು ಕಲ್ಯಾಣ ಇಲಾಖೆ (ಪೂರ್ವ) ವಿಭಾಗ |
| 8 | ಶ್ರೀ.ರವಿಚಂದರ್ | ಸ್ಥಳೀಯರು |
| 9 | ಶ್ರೀ.ಬಿ.ಶಿವಕುಮಾರ್ | ಸ್ಥಳೀಯರು |
| 10 | ವಾರ್ಡ್‌ನ ಸ್ಥಳೀಯರು / ಸದಸ್ಯರುಗಳು | |

ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಆರೋಗ್ಯ ವೈಧ್ಯಾಧಿಕಾರಿಗಳು:-** ವಾರ್ಡ್‌ನ ನಾಗವಾರ ಪ್ರದೇಶದಲ್ಲಿ ಸೇಟ್‌ಲೇನ್, ಸಮಧಾನನಗರ, ಚೂನಾಲೇನ್, ಹಾಗೂ ಅಧಿಕ ಹೆಚ್ಚಿನ ಜನಸಂದಣಿ ಇರುವ ಪ್ರದೇಶಗಳಿಗೆ ಸೊಳ್ಳೆಗಳ ಹಾವಳಿ ಹೆಚ್ಚಾಗಿದ್ದು, ಶುಶ್ರೂಶಕರು ಹಾಗೂ ಆಶಾ ಕಾರ್ಯಕರ್ತೆಯರನ್ನು ಸರ್ಕಾರಿ ಶಾಲೆ, ಖಾಸಗಿ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಆರೋಗ್ಯ ತಪಾಸಣೆ ನಡೆಸಬೇಕೆಂದು ಹಾಗೂ ವಾರ್ಡ್‌ನ ವ್ಯಾಪ್ತಿಯಲ್ಲಿ ಫಾಗಿಂಗ್ ಮತ್ತು ಸ್ಪ್ರೇಯಿಂಗ್ ಸಿಂಪಡಿಸಬೇಕೆಂದು ಹಾಗೂ ಡೇಂಗ್ಯೂ ಜ್ವರದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

**(ಕ್ರಮ:- ಆರೋಗ್ಯ ವೈಧ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ)**

2) **ನೀರು ಸರಭರಾಜು ಮತ್ತು ಒಳಚರಂಡಿ ವ್ಯವಸ್ಥೆ ಬಗ್ಗೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ):-** ವಾರ್ಡ್ ವ್ಯಾಪ್ತಿಯ ಹಿದಾಯತ್‌ನಗರ ಪ್ರದೇಶದಲ್ಲಿ ನೀರು ಸರಬರಾಜು ಮಾಡುವ ಪೈಪ್ 4 ಇಂಚು ಇದ್ದು, ಸದರಿ ಪ್ರದೇಶದಲ್ಲಿ ಜನಸಂಖ್ಯೆ ಹೆಚ್ಚಾಗಿರುವುದರಿಂದ ಪೈಪ್‌ಬದಲಾವಣೆ ಮಾಡಿಕೊಡಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಚಾಲ್ತಿಯಲ್ಲಿರುವ ನೀರು ಸರಬರಾಜು ಕೊಳಾಯಿಗಳ ಮಾಲೀಕರುಗಳಿಗೆ ನೋಟೀಸ್ ನೀಡಿ ನಂತರ ಕೊಳಾಯಿಗಳನ್ನು ತೆರವುಗೊಳಿಸಲು ಬಿ.ಎಂ.ಟಿ.ಎಫ್‌ಗೆ ಪ್ರಕರಣ ದಾಖಲಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ-ವಿಭಾಗ, ರವರ ವತಿಯಿಂದ ಸೂಕ್ತ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ :- ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ಕಲ್ಯಾಣನಗರ)**

**3) ವಿದ್ಯುತ್ ವಿಭಾಗ:-** ವಾರ್ಡ್ ವ್ಯಾಪ್ತಿಯ ವೀರಣ್ಣಪಾಳ್ಯ ಸುತ್ತಮುತ್ತಲಿನ ಪ್ರದೇಶದಲ್ಲಿ ಬೀದಿದೀಪಗಳು ಸರಿಯಾಗಿ ನಿರ್ವಹಣೆಯಾಗದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಈ ಬಗ್ಗೆ ಸದರಿ ಪ್ರದೇಶದಲ್ಲಿ ಕೂಡಲೇ ವಿದ್ಯುತ್ ದೀಪಗಳನ್ನು ಅಳವಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಗೋವಿಂದಪುರ ಮುಖ್ಯರಸ್ತೆ, ಗೋವಿಂದಪುರ ಪೋಲೀಸ್ ಠಾಣೆ ಹತ್ತಿರ ಕಂಬಗಳಿಂದ 5 ಅಡಿ ಎತ್ತರಕ್ಕೆ ತಂತಿಯನ್ನು ಅಳವಡಿಸಿರುತ್ತಾರೆ. ತಂತಿಗಳು ಕಟ್ಟಾಗಿ ಸಾರ್ವಜನಿಕರಿಗೆ ತೊಂದರೆಯಾಗುವುದಾಗಿ ತಿಳಿಸಿದರು.

ಈ ಬಗ್ಗೆ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ ರವರಿಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ :- ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ, 16ನೇ ಮಹಡಿ ಮೆಯೋಹಾಲ್, ಪಿ.ಯು.ಬಿ ಕಟ್ಟಡ)**

**4) ಘನತ್ಯಾಜ್ಯ ನಿರ್ವಹಣೆ:-** ವಾರ್ಡ್ ವ್ಯಾಪ್ತಿಯ, ಹಿದಾಯತ್ ನಗರ, ಆಡ್ಕರ್ ಕಾಲೋನಿ, ಎ.ಎಂ.ಸಿ ರಸ್ತೆಗಳಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸುತ್ತಿಲ್ಲವೆಂದು ಹಾಗೂ ಘನತ್ಯಾಜ್ಯ ಪಾಯಿಂಟ್‌ಗಳ ಹತ್ತಿರ ಆಟೋಗಳಲ್ಲಿ ಮತ್ತು ವಾಹನಗಳಲ್ಲಿ ಅಪರಿಚಿತರು ಕಸದ ರಾಶಿಯನ್ನು ಸುರಿಯುತ್ತಿದ್ದಾರೆಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಮುಂದುವರೆದು ದಿನಾಂಕ: 10.07.2022 ರಂದು ಬಕ್ರೀದ್ ಹಬ್ಬವಿರುವುದರಿಂದ ವಾರ್ಡ್‌ನಲ್ಲಿ ಮುಂಜಾಗ್ರತ ಕ್ರಮವನ್ನು ತೆಗೆದುಕೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ವಿಭಾಗ ರವರಿಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ :-ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)**

**5) ರಸ್ತೆ ಮೂಲಭೂತ ಸೌಕರ್ಯ :-** ವಾರ್ಡ್ ವ್ಯಾಪ್ತಿಯ ನಾಗವಾರ ಮುಖ್ಯರಸ್ತೆ, ಚರ್ಚ್ ರಸ್ತೆ, ಶಾಂಪುರ ಮುಖ್ಯರಸ್ತೆ, ಗೋವಿಂದಪುರ ಮುಖ್ಯರಸ್ತೆ ಮತ್ತು ಎ.ಎಂ.ಸಿ ರಸ್ತೆಗಳಲ್ಲಿ ಎರಡು ಬದಿಯ ಚರಂಡಿಗಳಲ್ಲಿ ಸಿಲ್ಟ್ ತುಂಬಿದ್ದು, ನೀರು ಸರಾಗವಾಗಿ ಹರಿಯದೆ ರಸ್ತೆಯ ಮೇಲೆ ಹರಿದು ಮನೆಗಳಿಗೆ ನೀರು ನುಗ್ಗಿರುತ್ತದೆ ಮತ್ತು ಚರಂಡಿಯ ಮೇಲಿನ ಸ್ಲ್ಯಾಬ್‌ಗಳು ಕೆಲವು ಇಲ್ಲದೇ ಇರುವುದು ಕಂಡು ಬಂದಿದ್ದು, ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗಿರುತ್ತದೆ ಹಾಗೂ ಅರೇಬಿಕ್ ಕಾಲೇಜ್ ಹತ್ತಿರ(ಮೆಟ್ರೋ) ರಸ್ತೆಯನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತಿದ್ದು, ಗೋವಿಂದಪುರ ರೈಲ್ವೆಗೇಟ್‌ನಿಂದ ಮಾರಮ್ಮ ದೇವಸ್ಥಾನದವರೆಗೆ ರಸ್ತೆ ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸಿರುವುದಿಲ್ಲವೆಂದು ಸ್ಥಳೀಯರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ಬಿ.ಬಿ.ಎಂ.ಪಿ ರವರ ವತಿಯಿಂದ ಸೂಕ್ತ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿ ರವರು ತಿಳಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ವಿಭಾಗ ಬಿ.ಬಿ.ಎಂ.ಪಿ)**

**6) ನಾಡ ಕಛೇರಿ :-** ವಾರ್ಡ್ ವ್ಯಾಪ್ತಿಯ ವೃದ್ಯಾಪ್ಯ ವೇತನ, ವಿಧವಾ ವೇತನ, ಸಾರ್ವಜನಿಕರಿಗೆ ಸಮರ್ಪಕವಾಗಿ ನೀಡುತ್ತಿಲ್ಲವೆಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ನಾಡ-ಕಛೇರಿ ಅಧಿಕಾರಿ ರವರಿಗೆ ಕ್ರಮ ಕೈಗೊಳ್ಳಲು ತಿಳಿಸುವಂತೆ ನೋಡಲ್ ಅಧಿಕಾರಿರವರು ತಿಳಿಸಿದರು.

**7) ಕಲ್ಯಾಣ ಇಲಾಖೆ :-** ವಾರ್ಡ್ ವ್ಯಾಪ್ತಿಯಲ್ಲಿ ಬಿ.ಬಿ.ಎಂ.ಪಿ ವತಿಯಿಂದ ಉಚಿತವಾಗಿ ನೀಡುವ ಯೋಜನೆಗಳಲ್ಲಿ ಸೈಕಲ್, ಟೈಲರಿಂಗ್ ಮಿಷನ್, ತಳ್ಳುವ ಗಾಡಿಗಳು, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಹಾಗೂ ಮೆಡಿಕಲ್ ಸ್ಕೀಮ್ ಈ ಯೋಜನೆಗಳು ನಿಂತು ಹೋಗಿದ್ದು, ಯಾವಾಗ ಪ್ರಾರಂಭವಾಗುತ್ತದೆ ಎಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.

**(ಕ್ರಮ:- ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಇಲಾಖೆ ಬಿ.ಬಿ.ಎಂ.ಪಿ)**

**8) ಕಾಮಗಾರಿ ಇಲಾಖೆ :-** ವಾರ್ಡ್ ವ್ಯಾಪ್ತಿಯಲ್ಲಿ ಒಂಟಿ ಮನೆ ನಿರ್ಮಾಣ ಕಾಮಗಾರಿಗಾಗಿ ಶ್ರೀಮತಿ.ಲಾಜರ್, ಶ್ರೀ.ರಾಜು, ಶ್ರೀಮತಿ.ಸುಮತಿ ಫಲಾನುಭವಿಗಳಿಗೆ ಒಂಟಿ ನಿರ್ಮಾಣಕ್ಕೆ ಕಾರ್ಯದೇಶವನ್ನು ನೀಡಲಾಗಿದ್ದು, ಸದರಿ ಫಲಾನುಭವಿಗಳು ಮನೆಯನ್ನು ನಿರ್ಮಿಸಿಕೊಂಡಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

**(ಕ್ರಮ:- ಸ.ಕಾ.ಅ ಹೆಚ್.ಬಿ.ಆರ್ ಲೇಔಟ್ ಉಪ-ವಿಭಾಗ, ಬಿ.ಬಿ.ಎಂ.ಪಿ)**

ಮುಂದುವರೆದು ದಿನಾಂಕ: 02.07.2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಬಿ.ಡಬ್ಲ್ಯೂ.ಎಸ್.ಎಸ್.ಇಲಾಖೆ, ಸಹಾಯಕ ಕಂದಾಯ ಅಧಿಕಾರಿ, ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಇಲಾಖೆ, ಪೋಲೀಸ್ ಇಲಾಖೆ, ಸಂಚಾರಿ ಪೋಲೀಸ್ ಠಾಣೆ ಇಲಾಖೆ, ಬೆಸ್ಕಾಂ ಇಲಾಖೆ, ತೋಟಗಾರಿಕೆ ಇಲಾಖೆ, ಅರಣ್ಯ ಇಲಾಖೆ, ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ವಂದನೆಗಳೊಂದಿಗೆ,**

**ಶ್ರೀ.ನಾಗರಾಜು**
ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.23 ನಾಗವಾರ

**(ಶ್ರೀ.ಇಮ್ರಾನ್.ಟಿ.ಎ)**
ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.23 ನಾಗವಾರ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಪೂರ್ವ) ರವರಅವಗಾಹನೆಗಾಗಿ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ವಿಭಾಗ ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6. ಕಾರ್ಯಪಾಲಕ ಅಭಿಯಂತರರು (ಎಲೆಕ್ಟ್ರಿಕಲ್) ವಿದ್ಯುತ್ ವಿಭಾಗ, 16ನೇ ಮಹಡಿ, ಪಿ.ಯು.ಬಿ ಬಿಲ್ಡಿಂಗ್, ಮೆಯೋಹಾಲ್, ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕಲ್ಯಾಣನಗರ ಉಪ-ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ, ಉಪ-ವಿಭಾಗ ಆರ್.ಟಿ ನಗರ ರವರಿಗೆ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ ವಿಭಾಗ ಫ್ರೆಜರ್‌ಟೌನ್ ರವರಿಗೆ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ-ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಇಲಾಖೆ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ಉಪ-ಅರಣ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
14. ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
15. ಠಾಣಾಧಿಕಾರಿಗಳು, ಕೆ.ಜಿ.ಹಳ್ಳಿ ಪೋಲೀಸ್ ಠಾಣೆ / ಟ್ರಾಫೀಕ್ ಪೋಲೀಸ್ ಠಾಣೆ ರವರಿಗೆ ಸಲ್ಲಿಸಿದೆ.
16. ಕಛೇರಿ ಕಡತಕ್ಕೆ.